ಕನ್ನಡಪ್ರಭ
ಬುಧವಾರ 6.05.2026

ಇನ್ನಷ್ಟು ಸುದ್ದಿ ಪುಟ 9ರಲ್ಲಿ

ಗರಿಷ್ಠ 33 c | ಕನಿಷ್ಠ 22 c

ಸುದ್ದಿ ಸಿಂಚನ

ವಿಮೆಗೆ ದರ ಪಟ್ಟಿ ಆಹ್ವಾನ

ಗುಂಡ್ಲುಪೇಟೆ: ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಆಡಳಿತ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು 620 ಮಂದಿ ಅಧಿಕಾರಿ, ನೌಕರರಿಗೆ 20 ಲಕ್ಷ ರು.ಗಳಿಗೆ ವೈಯಕ್ತಿಕ ಅಪಘಾತ ವಿಮೆ ತೆರೆಯಲು ಹಾಗೂ ಯಾವುದೇ ಅಪಘಾತದಿಂದ ಗಾಯಗೊಂಡಲ್ಲಿ ಗಾಯಾಳುಗಳಿಗೆ ವಿಮೆಯಿಂದ ಚಿಕಿತ್ಸೆ ವೆಚ್ಚ ಪಾವತಿಸಲು ಆಸಕ್ತ ಸಂಸ್ಥೆಗಳಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ. ಮೇ 11ರ ಸಂಜೆ 4.30ರೊಳಗೆ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಅರಣ್ಯಸಂರಕ್ಷಣಾಧಿಕಾರಿ ಹಾಗೂ ನಿರ್ದೇಶಕರ ಕಚೇರಿಗೆ ಖುದ್ದಾಗಿ ಅಥವಾ ಇ-ಮೇಲ್ directorbtrtr@gmail.com ಮೂಲಕ ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ವೀರಶೈವ ಲಿಂಗಾಯತ ಸಭೆ

ಗುಂಡ್ಲುಪೇಟೆ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ತಾಲೂಕು ಘಟಕದ ಅಧ್ಯಕ್ಷ ಸ್ಥಾನ ಚುನಾವಣೆ ಸಂಬಂಧ ಮೇ 6ರಂದು ಪಟ್ಟಣದಲ್ಲಿ ವೀರಶೈವ ಲಿಂಗಾಯತರ ಸಭೆಯಲ್ಲಿ ಕರೆಯಲಾಗಿದೆ. ಪಟ್ಟಣದ ಸೋಮೇಶ್ವರ ವಿದ್ಯಾರ್ಥಿ ನಿಲಯದಲ್ಲಿ ಮೇ 6 ಬುಧವಾರ ಬೆಳಗ್ಗೆ 11 ಗಂಟೆಗೆ ತಾಲೂಕಿನ ವೀರಶೈವ ಲಿಂಗಾಯತರ ಪೂರ್ವಭಾವಿ ಸಭೆ ಕರೆದಿದ್ದು, ತಾಲೂಕಿನ ವೀರಶೈವ ಲಿಂಗಾಯತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಯುವ ಘಟಕದ ಅಧ್ಯಕ್ಷ ವೀರನಪುರ ಗುರುಪ್ರಸಾದ್ ಕೋರಿದ್ದಾರೆ.

ಐಟಿಐ ವಿವಿಧ ಕೋರ್ಸ್ ಪ್ರವೇಶಕ್ಕೆ ಅರ್ಜಿ ಆಹ್ವಾನ

ಗುಂಡ್ಲುಪೇಟೆ: ಇಲ್ಲಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2026ನೇ ಸಾಲಿನ ಪ್ರವೇಶಕ್ಕಾಗಿ ಲಭ್ಯವಿ



ರುವ ಸ್ಥಾನಗಳಿಗೆ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಕಂಪ್ಯೂಟರ್ ಆಪರೇಟರ್‌ಆ್ಯಂಡ್ ಪ್ರೋಗ್ರಾಮಿಂಗ್ ಅಸಿಸ್ಟೆಂಟ್ (ಸಿಒಪಿಎ), ಇಂಡಸ್ಟ್ರಿಯಲ್ ರೊಬೊಟಿಕ್ಸ್ ಆ್ಯಂಡ್ ಡಿಜಿಟಲ್ ಮ್ಯಾನುಫ್ಯಾಕ್ಚರಿಂಗ್ ಟೆಕ್ನಿಷಿಯನ್ (ಐಆರ್ ಮತ್ತು ಡಿಎಂ), ಎಂಜಿನಿಯರಿಂಗ್ ಡಿಸೈನ್ ಟೆಕ್ನಿಷಿಯನ್ (ಇಡಿಟಿ), ಮ್ಯಾನುಫ್ಯಾಕ್ಚರಿಂಗ್ ಪ್ರೋಸೆಸ್ ಕಂಟ್ರೋಲ್ ಅಂಡ್ ಆಟೋಮೆಷನ್ (ಎಂಪಿಸಿಎ) ಕೋರ್ಸಗಳು ಒಂದು ವರ್ಷದ ಅವಧಿ ಹಾಗೂ ಎಲೆಕ್ಟ್ರಾನಿಕ್ಸ್ ಮೆಕಾನಿಕ್ಸ್ (ಇಎಂ), ಎಲೆಕ್ಟ್ರಿಷಿಯನ್ (ಇಎನ್), ಮೆಕ್ಯಾನಿಕ್ ಎಲೆಕ್ಟ್ರಿಕ್ ವೆಹಿಕಲ್-ಎಂಇವಿ, ಅಡ್ವಾನ್ಸ್ಡ್ ಸಿಎನ್‌ಸಿ ಮೆಷನಿಂಗ್ ಟೆಕ್ನಿಷಿಯನ್ ಸಿಎನ್‌ಸಿ, ವರ್ಚುವಲ್ ಅನಾಲಿಸಿಸ್ ಆ್ಯಂಡ್ ಡಿಸೈನರ್(ವಿಎಡಿ) ಹಾಗೂ ಫಿಟ್ಟರ್‌ಕೋರ್ಸ್‌ಗಳು ಎರಡು ವರ್ಷದ ಅವಧಿಯದ್ದಾಗಿರುತ್ತದೆ. ಅಭ್ಯರ್ಥಿಗಳು ಅರ್ಜಿಯನ್ನು ಇಲಾಖೆಯ ವೆಬ್‌ಸೈಟ್ www.cite.karnataka.gov.in ಮೂಲಕ ಅಥವಾ ಸಂಸ್ಥೆಯ ಹೆಲ್ಪ್ ಡೆಸ್ಕ್ ಮೂಲಕ ಮೇ 8ರೊಳಗೆ ಸಲ್ಲಿಸಬೇಕು. ಎಲೆಕ್ಟ್ರಿಷಿಯನ್ ವೃತ್ತಿಯ 20 ಸ್ಥಾನಗಳಿಗೆ ಆಫ್‌ಲೈನ್ ನಲ್ಲಿ ಮೊದಲು ಬಂದವರಿಗೆ ಪ್ರವೇಶ ನೀಡಲಾಗುವುದು. ಮಹಿಳಾ ಅಭ್ಯರ್ಥಿಗಳಿಗೆ ಉಚಿತವಾಗಿ ಪ್ರವೇಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಹೆಲ್ಪ್ ಡೆಸ್ಕ್ ಮೊ.ಸಂ 9980895590, 6360318511 ಸಂಪರ್ಕಿಸುವಂತೆ ಸಂಸ್ಥೆಯ ಪ್ರಾಚಾರ್ಯ ಎಚ್.ಪಿ. ಶ್ರೀಕಂಠಾರಾಧ್ಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

8ಕ್ಕೆ ಕೆಡಿಪಿ ಪರಿಶೀಲನಾ ಸಭೆ

ಚಾಮರಾಜನಗರ: ಜಿಲ್ಲಾಮಟ್ಟದ ತ್ರೈಮಾಸಿಕ ಕೆಡಿಪಿ



ಪ್ರಗತಿ ಪರಿಶೀಲನಾ ಸಭೆಯು ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಅವರ ಅಧ್ಯಕ್ಷತೆಯಲ್ಲಿ ಮೇ 8ರಂದು ಬೆಳಗ್ಗೆ 10.30ಕ್ಕೆ ಜಿಲ್ಲಾಡಳಿತ ಭವನದಲ್ಲಿ ನಡೆಯಲಿದೆ ಎಂದು ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಿಸಿಲಿನ ರಣಕೇಕೆಯಿಂದಾಗಿ ಬೆಂದು ಹೋಗಿದ್ದ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನಲ್ಲಿ ವರ್ಷಧಾರೆ ಮುಂದುವರಿದಿದೆ. ಪರಿಣಾಮ ನೀರಿನ ದಾಹದಿಂದಾಗಿ ಬಳಲಿದ್ದ ಅರಣ್ಯ ಜೀವಿಗಳು ನಿಟ್ಟುಸಿರು ಬಿಡುವಂತಾಗಿದೆ. ಅಷ್ಟೇ ಅಲ್ಲದೇ ಕೃಷಿ ಚಟುವಟಿಕೆಗಳು ಗರಿಗೆದರಿವೆ.



ಗುಂಡ್ಲುಪೇಟೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷ ಸ್ಥಾನಕ್ಕೆ ಕೊಡಸೋಗೆ ಕೆ.ಎಸ್. ಶಿವಪ್ರಸಾದ್ ಅವರು ನಾಮಪತ್ರ ಸಲ್ಲಿಸಿದರು. ಈ ವೇಳೆ ಶಿವಪ್ರಸಾದ್ ಅವರನ್ನು ಬೆಂಬಲಿಸಿ ಸಮಾಜದ ಮುಖಂಡರು, ಯುವಕರು ಇದ್ದರು.

ವೀರಶೈವ ಮಹಾಸಭಾ ಅಧ್ಯಕ್ಷ ಸ್ಥಾನಕ್ಕೆ ಕೆ.ಎಸ್. ಶಿವಪ್ರಸಾದ್ ನಾಮಪತ್ರ

• **ಕನ್ನಡಪ್ರಭ ವಾರ್ತೆ** ಗುಂಡ್ಲುಪೇಟೆ

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ತಾಲೂಕು ಘಟಕದ ಅಧ್ಯಕ್ಷ ಸ್ಥಾನಕ್ಕೆ ಕೊಡಸೋಗೆ ಕೆ.ಎಸ್. ಶಿವಪ್ರಸಾದ್ ನಾಮಪತ್ರ ಸಲ್ಲಿಸಿದರು. ಪಟ್ಟಣದ ಸೋಮೇಶ್ವರ ವಿದ್ಯಾರ್ಥಿ ನಿಲಯದ ಅಖಿಲ ಭಾರತ ವೀರಶೈವ ಮಹಾಸಭಾದ ಕಚೇರಿಯಲ್ಲಿ ಚುನಾವಣಾಧಿಕಾರಿ ಅಂಕಪ್ಪ ಅವರಿಗೆ ನಾಮಪತ್ರ ಸಲ್ಲಿಸಿದರು. ಕೆ.ಎಸ್. ಶಿವಪ್ರಸಾದ್ ಅವರು ಜಿಲ್ಲಾ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಮಾಜಿ ಅಧ್ಯಕ್ಷ ಕೊಡಸೋಗೆ ಶಿವಬಸಪ್ಪ ಪುತ್ರರಾಗಿದ್ದಾರೆ. ಕೊಡಸೋಗೆ ಗ್ರಾಪಂ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಇದೀಗ ತಾಲೂಕು ಘಟಕದ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಲು ಮುಂದಾಗಿದ್ದಾರೆ. ಈ ಸಮಯದಲ್ಲಿ ಕೆ.ಎಸ್. ಶಿವಪ್ರಸಾದ್ ಬೆಂಬಲಿಸಿ ವೀರಶೈವ ಲಿಂಗಾಯತ ಸಮಾಜದ ಮುಖಂಡರು, ಯುವಕರು ಇದ್ದರು.

ಸಮಾಜದ ಆರೋಗ್ಯ ರಕ್ಷಣೆಗೆ ಪತ್ರಕರ್ತರ ಕೊಡುಗೆ ಅಪಾರ

ಪತ್ರಕರ್ತರಿಗೆ ಅಭಿನಂದಿಸಿ ಶಾಸಕ ಪುಟ್ಟರಂಗಶೆಟ್ಟಿ ನುಡಿ



ಪತ್ರಕರ್ತ ಪ್ರಕಾಶ್ ಬೆಲ್ಲದ್ ಅವರಿಗೆ ಶಿವರಾತ್ರಿಶ್ವರ ಮಾಧ್ಯಮ ಪ್ರಶಸ್ತಿ ಪ್ರದಾನ ಮಾಡಲಾಯಿತು.

• **ಕನ್ನಡಪ್ರಭ ವಾರ್ತೆ** ಚಾಮರಾಜನಗರ

ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ, ಸಮಾಜ ಸ್ವಾಸ್ಥ್ಯ ಕಾಪಾಡುವಲ್ಲಿ ಪತ್ರಕರ್ತರ ಪಾತ್ರ ದೊಡ್ಡದು ಎಂದು ಶಾಸಕ ಸಿ. ಪುಟ್ಟರಂಗಶೆಟ್ಟಿ ಹೇಳಿದರು.

ಜೆಎಸ್‌ಎಸ್ ಮಹಿಳಾ ಕಾಲೇಜು ಸೆಮಿನಾರ್ ಹಾಲ್‌ನಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಚಾಮರಾಜನಗರ ಜಿಲ್ಲಾ ಘಟಕ ಸಹಯೋಗ ಜೆಎಸ್‌ಎಸ್ ಮಹಾವಿದ್ಯಾಪೀಠ ಮೈಸೂರು ವತಿಯಿಂದ ನಡೆದ ಶ್ರೀಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿದರು.

ಪತ್ರಿಕಾರಂಗ ಸಮಾಜ ಎಚ್ಚರಿಸುವ ಕೆಲಸ ಮಾಡುತ್ತಿದೆ. ದಿಕ್ಕು ತಪ್ಪುವ ಸಮಾಜ ಜನಪ್ರತಿನಿಧಿಗಳನ್ನು ಎಚ್ಚರಿಸುವ, ಒಳ್ಳೆಯರನ್ನು ಬೆಳಕು ಚೆಲ್ಲುವ ಎರಡು ಕೆಲಸವನ್ನು ಪತ್ರಿಕಾರಂಗ ಮಾಡುತ್ತಿದೆ. ತಮ್ಮಲ್ಲಿ ಏನಾದರೂ ತಪ್ಪುಗಳಿದ್ದರೆ ತಿದ್ದಿಕೊಳ್ಳಲು ಒಂದು ಅವಕಾಶ ಇರುತ್ತದೆ. ಜಿಲ್ಲೆ, ತಾಲೂಕು, ರಾಜ್ಯದಲ್ಲಿ ಪತ್ರಿಕಾರಂಗ ಬೆಳುಕು ಚೆಲ್ಲುವ ಕೆಸಲವನ್ನು ಪತ್ರಿಕಾ ರಂಗ ಮಾಡುತ್ತಿದೆ ಎಂದರು.

ಜಿಲ್ಲಾಧಿಕಾರಿ ಶ್ರೀರೂಪಾ ಪ್ರಶಸ್ತಿ ಪ್ರದಾನಿಸಿದರು. ನಮ್ಮ ಜಿಲ್ಲೆಯ ಪತ್ರಕರ್ತರಿಗೆ ಜೆಎಸ್‌ಎಸ್ ಮಹಾವಿದ್ಯಾಪೀಠವು ಶ್ರೀಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿ ಪ್ರದಾನ ಮಾಡಿರುವುದು ತುಂಬಾ ಸಂತಸವಾಗಿದೆ. ಜಿಲ್ಲೆಯು ತುಂಬಾ ಅರಣ್ಯಪ್ರದೇಶವನ್ನು ಹೊಂದಿದೆ 160 ಗ್ರಾಮಗಳು

ಹಾಡಿಗಳಲ್ಲಿದೆ. ಅಲ್ಲೆಲ್ಲ ನಮ್ಮ ಮಾಧ್ಯಮ ಮಿತ್ರರು ಹೋಗಿ ವರದಿ ಮಾಡುತ್ತಾರೆ. ಸಣ್ಣಪುಟ್ಟ ವಿಚಾರಗಳು ಜಿಲ್ಲಾಡಳಿತ ಗಮನಕ್ಕೆ ಬರುವುದಿಲ್ಲ ಪತ್ರಿಕೆಗಳಲ್ಲಿ ಬರುವ ಸುದ್ದಿಗಳನ್ನು ಗಮನಿಸಿ ಅಂತಹ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಿ ಕ್ರಮಕ್ಕೆಗೊಳ್ಳುವ ಕೆಲಸವನ್ನು ಮಾಡಲಾಗುತ್ತಿದೆ ಎಂದರು.

ಇದೇ ವೇಳೆ ಪ್ರತಿ ವರ್ಷವೂ ಜಿಲ್ಲೆಗೆ ಪ್ರತ್ಯೇಕವಾಗಿ ಪ್ರಶಸ್ತಿ ನೀಡುವಂತೆ ಸಂಘದ ಅಧ್ಯಕ್ಷ ಆರ್.ಎನ್.ಸಿದ್ದಲಿಂಗಸ್ವಾಮಿ ಅವರು ಜೆಎಸ್‌ಎಸ್ ಮಹಾವಿದ್ಯಾಪೀಠಕ್ಕೆ ಮನವಿ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಪ್ರಧಾನ ಕಾರ್ಯದರ್ಶಿ ಲಕ್ಕೂರು ಪ್ರಸಾದ್, ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.

ಕೆರೆಗೆ ನೀರು ತುಂಬಿಸಲು ಆಗ್ರಹಿಸಿ ರೈತರ ಧರಣಿ

ಹುತ್ತೂರು ಕೆರೆ ಆವರಣದಲ್ಲಿ ಪ್ರತಿಭಟನೆ



ಕೆರೆಗಳಿಗೆ ನೀರು ತುಂಬಿಸಲಾಗ್ರಹಿಸಿ ರೈತರಿಂದ ಪ್ರತಿಭಟನೆ.

• **ಕನ್ನಡಪ್ರಭ ವಾರ್ತೆ** ಗುಂಡ್ಲುಪೇಟೆ

ಚಾಮರಾಜನಗರ ತಾಲೂಕಿನ ಕೆರೆಗಳಿಗೆ ನೀರು ತುಂಬಿಸಬೇಕು ಎಂದು ಆಗ್ರಹಿಸಿ 3ನೇ ಹಂತದ ಅಚ್ಚುಕಟ್ಟು ಪ್ರದೇಶದ ರೈತರು ಪ್ರತಿಭಟನೆ ನಡೆಸಿದರು.

ಹುತ್ತೂರು ಕೆರೆ ಬಳಿ ರೈತರ ಪ್ರತಿಭಟನೆ ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಕಾಡ ಎಇಇ ಮಹೇಶ್ ಪ್ರತಿಭಟನಕಾರರೊಂದಿಗೆ ಚರ್ಚಿಸಿದರು. 3ನೇ ಹಂತದ ಕಿಲಗೆರೆ, ಅಮಚವಾಡಿ, ಅರಕಲವಾಡಿ ಹಾಗೂ ಮಾಲೂರು ಕೆರೆಗಳಿಗೆ ನೀರು ಸ್ಥಗಿತಗೊಂಡಿದೆ. ಕೂಡಲೇ ನೀರು ಬಿಡಬೇಕು ಎಂದು ಆಗ್ರಹಿಸಿ ಎಇಇ ಮಹೇಶ್‌ರೊಂದಿಗೆ ವಾಗ್ವಾದ ನಡೆಸಿದರು. ಈ ಸಮಯದಲ್ಲಿ ರೈತರು ಮಾತನಾಡಿ, ನೀವು 4ನೇ ಹಂತದ ಕೆರೆಗಳಿಗೆ ನೀರು ತುಂಬಿಸುತ್ತಿದ್ದೀರೆ. ಆದರೆ 3ನೇ ಹಂತದ ಕೆರೆಗಳಿಗೆ ನೀರು ಕಡಿಮೆಯಾಗಿದೆ. 3ನೇ ಹಂತಕ್ಕೆ ಸೇರಿದ ಕೆರೆಗಳಿಗೆ ನೀರು ಹರಿಸಬೇಕು ಎಂದು ರೈತರು ಎಇಇ ಮಹೇಶ್‌ರನ್ನು ಆಗ್ರಹಿಸಿದರು.

ಎಇಇ ಮಹೇಶ್ ಮಾತನಾಡಿ, 4ನೇ ಹಂತದ ಕೆರೆಗಳಿಗೆ ನೀರು ಹರಿಸಲಾಗುತ್ತಿದೆ. ಕಾಲಾವಕಾಶ ಕೊಡಿ 3ನೇ ಹಂತದ ಕೆರೆಗಳಿಗೂ ನೀರು ತುಂಬಿಸುತ್ತೇನೆ ಎಂದು ಭರವಸೆ ನೀಡಿದರು. ಬಳಿಕ ರೈತರು ಪ್ರತಿಭಟನೆ ನಿಲ್ಲಿಸಿದರು. ಚಾಮರಾಜನಗರ ತಾಲೂಕಿನ ಆಲಂಬೂರು ಏತ ನೀರಾವರಿ ಯೋಜನೆಯ 3ನೇ ಹಂತದ ಕೆರೆಗಳ ಅಚ್ಚುಕಟ್ಟು ಪ್ರದೇಶದ ರೈತರು ಇದ್ದರು.

ಜಿಲ್ಲಾ ಬಾಸ್ಕೆಟ್ ಬಾಲ್ ಕೂಟದಲ್ಲಿ ಚಾಮರಾಜನಗರಕ್ಕೆ ಪ್ರಥಮ ಸ್ಥಾನ

ಕೊಳ್ಳೇಗಾಲದ ಮಹದೇಶ್ವರ ಕಾಲೇಜಿನಲ್ಲಿ ಕ್ರೀಡಾಕೂಟ



ಕೊಳ್ಳೇಗಾಲದ ಮಹದೇಶ್ವರ ಕಾಲೇಜಿನಲ್ಲಿ ಬಾಸ್ಕೆಟ್ ಬಾಲ್ ಪಂದ್ಯಾವಳಿ ಜರುಗಿತು.

• **ಕನ್ನಡಪ್ರಭ ವಾರ್ತೆ** ಕೊಳ್ಳೇಗಾಲ

ಪಟ್ಟಣದ ಮಹದೇಶ್ವರ ಕಾಲೇಜಿನಲ್ಲಿ ಜಿಲ್ಲಾಬಾಸ್ಕೆಟ್ ಬಾಲ್ ಅಸೋಸಿಯೇಷನ್ ಹಾಗೂ ಕರ್ನಾಟಕ ರಾಜ್ಯ ಬಾಸ್ಕೆಟ್ ಬಾಲ್ ಅಸೋಸಿಯೇಷನ್ ಸಹಯೋಗದೊಂದಿಗೆ 16 ವರ್ಷದೊಳಗಿನ ಬಾಲಕರು ಮತ್ತು ಬಾಲಕಿಯರ ಜಿಲ್ಲಾ ಮಟ್ಟದ ಪಂದ್ಯಾವಳಿಯಲ್ಲಿ ಬಾಲಕರ ವಿಭಾಗದಲ್ಲಿ ಚಾಮರಾಜನಗರ ತಂಡ ಪ್ರಥಮ ಸ್ಥಾನಗಳಿಸಿದೆ.

ಪಂದ್ಯಾವಳಿಯಲ್ಲಿ ದ್ವಿತೀಯ ಸ್ಥಾನವನ್ನು ಕೊಳ್ಳೇಗಾಲದ ಎಂಜಿಎಸ್‌ವಿ ಬಾಸ್ಕೆಟ್ ಬಾಲ್ ಕ್ಲಬ್ ತಂಡ ಪಡೆದುಕೊಂಡಿದ್ದು, ತೃತೀಯ ಸ್ಥಾನವನ್ನು ಗುಂಡ್ಲುಪೇಟೆ ಕ್ಲಬ್ ತಂಡ, 4ನೇ ಸ್ಥಾನವನ್ನು ಕೊಳ್ಳೇಗಾಲದ ಮಹದೇಶ್ವರ ಕಾಲೇಜು ತಂಡ ಪಡೆದುಕೊಂಡಿದೆ.

ಬಾಲಕಿಯರ ವಿಭಾಗದಲ್ಲಿ ಪ್ರಥಮ ಸ್ಥಾನವನ್ನು ಗುಂಡ್ಲುಪೇಟೆ ಕ್ಲಬ್ ತಂಡ ಗಳಿಸಿದ್ದು, ದ್ವಿತೀಯ ಸ್ಥಾನವನ್ನು ಕೊಳ್ಳೇಗಾಲದ ಮಹದೇಶ್ವರ ಬಾಸ್ಕೆಟ್ ಬಾಲ್ ಕ್ಲಬ್ ಪಡೆದುಕೊಂಡಿದೆ. ಅದೇ ರೀತಿಯಲ್ಲಿ ತೃತೀಯ ಸ್ಥಾನವನ್ನು ಎಂಜಿಎಸ್‌ವಿ ಕ್ಲಬ್ ತನ್ನದಾಗಿಸಿಕೊಂಡಿದೆ.

ವಿಜೇತ ತಂಡಕ್ಕೆ ನಗರಸಭೆ ಮಾಜಿ ಅಧ್ಯಕ್ಷ ಶಾಂತರಾಜು, ನಾಮ ನಿರ್ದೇಶಿತ ಸದಸ್ಯ ದೇವಾನಂದ್ ಬಹುಮಾನ ವಿತರಿಸಿದರು.

ಈ ವೇಳೆ ಮಹಮ್ಮಸ್ ಮತೀನ್, ಚಾಮರಾಜನಗರ ಜಿಲ್ಲಾ ಬಾಸ್ಕೆಟ್ ಬಾಲ್ ಅಸೋಸಿಯೇಷನ್ ಅಧ್ಯಕ್ಷ ಚೇತನ್ ದೊರೆರಾಜು, ಉಪಾಧ್ಯಕ್ಷ ಮಹೇಶ್ ಕುಮಾರ್, ಕಾರ್ಯದರ್ಶಿ ಸುಮನ್ ಇನ್ನಿತರಿದ್ದರು.

ಸೈಕಲ್‌ಗೆ ಗೂಡ್ಸ್ ಟೆಂಪೋ ಡಿಕ್ಕಿ: ರಜೆಗೆ ಬಂದಿದ್ದ ಬಾಲಕ ಸಾವು

ಬೇಸಿಗೆ ರಜೆ ನಿಮಿತ್ತ ತಾತನ ಮನೆಗೆ ಬಂದಿದ್ದ 11ರ ಬಾಲಕ





• **ಕನ್ನಡಪ್ರಭ ವಾರ್ತೆ** ಕೊಳ್ಳೇಗಾಲ

ಬೇಸಿಗೆ ರಜೆಗೆ ತಾತನ ಮನೆಗೆ ಬಂದಿದ್ದ ಮೊಮ್ಮಗ ಸೈಕಲ್ ಸವಾರಿ ಮಾಡುವಾಗ ಗೂಡ್ಸ್ ವಾಹನ ಡಿಕ್ಕಿಯಾಗಿ ಸ್ಥಳದಲ್ಲೇ ಮೃತಪಟ್ಟ ಘಟನೆ ಕೊಳ್ಳೇಗಾಲದ ಹರಳೆ-ಅಣಗಳ್ಳಿ ಗ್ರಾಮದ ರಸ್ತೆಯಲ್ಲಿ ನಡೆದಿದೆ.

ಬೆಂಗಳೂರು ನಿವಾಸಿಯಾದ ಆನಂದ್ ರಾಜ್ ಎಂಬುವರ ಮಗ ಯಶವಂತ್ (11) ಮೃತ ಬಾಲಕ. ಬೇಸಿಗೆ ರಜೆ ಹಿನ್ನೆಲೆ ಅಣಗಳ್ಳಿ ಗ್ರಾಮದ ಶಿವಲಿಂಗಯ್ಯ ಎಂಬುವರ ಮನೆಗೆ ಬಂದಿದ್ದ. ಸೈಕಲೊಂದನ್ನು ಕೂಡ ಕುಟುಂಬಸ್ಥರು ಯಶವಂತ್‌ಗೆ ಕೊಡಿಸಿದ್ದರು.

ಮಂಗಳವಾರ ಬೆಳಗ್ಗೆ ಈತ ಸೈಕಲ್ ಸವಾರಿ ಮಾಡುವಾಗ ಗೂಡ್ಸ್ ವಾಹನವೊಂದು ಹಿಂಬದಿಯಿಂದ ಡಿಕ್ಕಿ ಹೊಡೆದಿದೆ. ಡಿಕ್ಕಿಯಾದ ರಭಸಕ್ಕೆ ಬಾಲಕ ಸ್ಥಳದಲ್ಲೇ ಮೃತಪಟ್ಟಿದ್ದು, ಸ್ಥಳಕ್ಕೆ ಕೊಳ್ಳೇಗಾಲ ಪೊಲೀಸರು ಭೇಟಿ ಕೊಟ್ಟು ಶವವನ್ನು ಮರಣೋತ್ತರ ಪರೀಕ್ಷೆಗಾಗಿ ಉಪ ವಿಭಾಗ ಆಸ್ಪತ್ರೆಗೆ ರವಾನೆ ಮಾಡಿದ್ದಾರೆ.

ಸೈಕಲ್ ಮತ್ತು ಗೂಡ್ಸ್ ವಾಹನ ವಶಕ್ಕೆ ಪಡೆದು ಕೇಸ್ ದಾಖಲಿಸಿದ್ದಾರೆ.

ವಿವಿಧ ಗುಡಿಗಳಿಗೆ ಕನ್ನ ಹಾಕುತ್ತಿದ್ದವರ ಬಂಧನ

ಯಳಂದೂರು ಪೊಲೀಸರ ಕಾರ್ಯಾಚರಣೆ ಫಲ









• **ಕನ್ನಡಪ್ರಭ ವಾರ್ತೆ** ಯಳಂದೂರು

ಯಳಂದೂರು ಪೊಲೀಸರು ಕಾರ್ಯಾಚರಣೆ ನಡೆಸಿ ಅಂಬಳೆ ಗ್ರಾಮದ ಶ್ರೀ ಚಾಮುಂಡೇಶ್ವರಿ ದೇಗುಲದಲ್ಲಿ ಕಳ್ಳತನ ಎಸಗಿದ್ದ ನಾಲ್ವರನ್ನು ಪೊಲೀಸರು ಬಂಧಿಸಿದ್ದಾರೆ. ಮೈಸೂರಿನ ಅರ್ಜುನ್, ಚೇತನ್, ಗೋವಿಂದ ಹಾಗೂ ಪಾಂಡವಪುರದ ಪರಮೇಶ್ ಬಂಧಿತ ಆರೋಪಿಗಳು. ಅಂಬಳೆ ಗ್ರಾಮದ ಚಾಮುಂಡೇಶ್ವರಿ ದೇಗುಲಕ್ಕೆ ಕನ್ನ ಹಾಕಿದ್ದ ಪ್ರಕರಣ ಸಂಬಂಧ ಯಳಂದೂರು ಠಾಣೆ ಪೊಲೀಸರು ಕಾರ್ಯಾಚರಣೆ ನಡೆಸಿ ಇವರನ್ನು ವಿಚಾರಣೆಗೆ ಒಳಪಡಿಸಿದಾಗ ಚಾಮುಂಡೇಶ್ವರಿ ದೇಗುಲದಲ್ಲಿ ಕಳ್ಳತನ ಸೇರಿದಂತೆ ಹಾಸನ, ಬಿಳಿಕೆರೆಯಲ್ಲಿ ಬೈಕ್ ಕಳವು, ಕುದೇರು, ಚಾಮರಾಜನಗರ, ಕೊಳ್ಳೇಗಾಲ ಠಾಣಾ ವ್ಯಾಪ್ತಿಯಲ್ಲಿ ದೇವಾಲಯಗಳಲ್ಲಿ ಕಳವು ಮಾಡಿದ್ದು ಬಯಲಾಗಿದೆ. ಬಂಧಿತರಿಂದ 2 ಬೈಕ್, ಬೆಳ್ಳಿ ನಾಗದೇವರ ಮೂರ್ತಿ, 10 ಗ್ರಾಂ ತೂಕದ ಚಿನ್ನದತಾಳಿಗಳು, 1 ಗ್ರಾಂನ ಒಂದು ಚಿನ್ನದುಂಗುರ, 2 ಲಕ್ಷ ನಗದನ್ನು ವಶಕ್ಕೆ ಪಡೆಯಲಾಗಿದೆ.

ಪಂಪ್‌ಸೆಟ್ ಮೋಟಾರ್, ಬ್ಯಾಟ್ರಿ ಎಗರಿಸುತ್ತಿದ್ದವರು ಖಾಕಿ ಬಲೆಗೆ

ತಮಿಳ್ನಾಡಿನ ಓರ್ವ, ರಾಜ್ಯದ ಇಬ್ಬರು ಅಂದರ್ ಮತ್ತೊಬ್ಬನಿಗಾಗಿ ಪೊಲೀಸರಿಂದ ಕಾರ್ಯಾಚರಣೆ

• **ಕನ್ನಡಪ್ರಭ ವಾರ್ತೆ** ಹನೂರು

ತಾಲೂಕಿನ ಕಾಂಚಳ್ಳಿ ಹಾಗೂ ಜಿಆರ್‌ನಗರ ಗ್ರಾಮಗಳಲ್ಲಿ ಪಂಪ್‌ಸೆಟ್ ಮೋಟಾರ್‌ಗಳು ಮತ್ತು ಸೋಲಾರ್ ಬ್ಯಾಟರಿಗಳನ್ನು ಕಳವು ಮಾಡುತ್ತಿದ್ದ ಮೂವರು ಆರೋಪಿಗಳನ್ನು ರಾಮಾಪುರ ಪೊಲೀಸರು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

■ ಆರೋಪಿಗಳ ವಿರುದ್ಧ ವಿವಿಧ ಠಾಣೆಗಳಲ್ಲಿ ಕೇಸು ದಾಖಲು

ಬಂಧಿತ ಆರೋಪಿಗಳನ್ನು ತಮಿಳುನಾಡಿನ ಮಣಿಕಂಠ (30), ಚಂಗದಾರಹಳ್ಳಿ ಗ್ರಾಮದ ಶ್ರೀರಂಗ (50) ಹಾಗೂ ಮಾರಸ್ವಾಮಿ (28) ಎಂದು ಗುರುತಿಸಲಾಗಿದೆ. ಪ್ರಕರಣದ 4ನೇ ಆರೋಪಿ ಕಾರ್ತಿಕ್ ತಲೆಮರೆಸಿಕೊಂಡಿದ್ದು, ಅವನ ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದಾರೆ.

ಘಟನೆಯ ವಿವರ ಪ್ರಕಾರ, ಏ.17ರಂದು ಚಂಗದಾರಹಳ್ಳಿ ಗ್ರಾಮದ ಮಣಿ ಎಂಬುವವರು ತಮ್ಮ ಜಮೀನಿನ ಮನೆಯಲ್ಲಿ ಇಟ್ಟಿದ್ದ 2 ಪಂಪ್‌ಸೆಟ್ ಮೋಟಾರ್‌ಗಳು ಕಳವಾಗಿರುವ ಬಗ್ಗೆ ರಾಮಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಈ ದೂರಿನ ಆಧಾರದಲ್ಲಿ ತನಿಖೆ ಕೈಗೊಂಡ ಪೊಲೀಸರು ನಾಲ್ವರು ಆರೋಪಿಗಳ ಪೈಕಿ ಮೂವರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಬಂಧಿತರಿಂದ 4 ಮೋಟಾರ್‌ಗಳು, 1 ಪಂಪ್, ಸೋಲಾರ್ ಫೆನ್ಸಿಂಗ್ ಬ್ಯಾಟರಿ, ಎನರ್ಜೈಸರ್, ಚಾರ್ಜರ್ ಸೇರಿದಂತೆ ಟಾಟಾ ಏಸ್ ಗೂಡ್ಸ್ ವಾಹನ, ಬೈಕ್ ಹಾಗೂ ಟಿವಿಎಸ್ ಎಕ್ಸ್‌ಎಲ್ ಸೂಪರ್ ದ್ವಿಚಕ್ರ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ.

ಈ ಸಂಬಂಧ ರಾಮಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ, ಮುಂದಿನ ತನಿಖೆ ಕೈಗೊಂಡಿದ್ದಾರೆ.

ಓದಿನ ಮನೆ | ಜೆಎಸ್‌ಎಸ್ ಕಾಲೇಜಿನಲ್ಲಿ ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಗಳ ಸಮಾರೋಪದಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರ ಸಲಹೆ

ಓದು, ಬರಹ ಹವ್ಯಾಸ ಜ್ಞಾನವೃದ್ಧಿಗೆ ಪೂರಕ: ರಾಮಮೂರ್ತಿ

• **ಕನ್ನಡಪ್ರಭ ವಾರ್ತೆ** ಗುಂಡ್ಲುಪೇಟೆ

ವಿದ್ಯಾರ್ಥಿಗಳು ಓದುವ ಜೊತೆಗೆ ಬರೆಯುವ ಹವ್ಯಾಸ ಬೆಳೆಸಿಕೊಂಡರೆ ಜ್ಞಾನದ ಶಕ್ತಿ ಹೆಚ್ಚಾದರೆ ದೇಶದ ಪ್ರಗತಿಗೆ ನಾಂದಿಯಾಗಲಿದೆ ಎಂದು ವಿಶ್ರಾಂತ ಪ್ರಾಂಶುಪಾಲ ಹಾಗೂ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಪ್ರೊ. ಕೆ. ರಾಮಮೂರ್ತಿ ರಾವ್ ಹೇಳಿದರು.

ಪಟ್ಟಣದ ಜೆಎಸ್‌ಎಸ್ ಅನುಭವ ಮಂಟಪದಲ್ಲಿ ಜೆಎಸ್‌ಎಸ್ ಮಹಾ ವಿದ್ಯಾಪೀಠ ಜೆಎಸ್‌ಎಸ್ ಕಲಾ ಮತ್ತು ವಾಣಿಜ್ಯ ಕಾಲೇಜು ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಗಳ ಸಮಾರೋಪ ಉದ್ಘಾಟಿಸಿ ಮಾತನಾಡಿದರು. ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳಲ್ಲೂ ವಿದ್ಯಾರ್ಥಿಗಳು ಭಾಗವಹಿಸಬೇಕೆಂದರು.

ಬದ್ಧತೆ ಹಾಗೂ ಶಿಸ್ತು, ಶ್ರದ್ಧೆಯಿಂದ ಮಾಡುವ ಯಾವುದೇ ಕೆಲಸವಾಗಲಿ ಯಶಸ್ಸು ಕಾಣಲಿದೆ. ಓದುವುದೇ ಬದ್ಧತೆಯಲ್ಲ. ಸಹ ಪಠ್ಯ ಚಟುವಟಿಕೆಗಳಲ್ಲೂ ಬದ್ಧತೆ ತೋರಿದರೆ ಭವಿಷ್ಯದಲ್ಲಿ ಒಳ್ಳೆಯದಾಗುತ್ತದೆ ಎಂದರು.

ಇತ್ತೀಚಗೆ ಓದುವ ಹವ್ಯಾಸ ಕಡಿಮೆಯಾಗುತ್ತಿದೆ. ಓದುವ ಹಾಗೂ ಬರೆಯುವ ಹವ್ಯಾಸ ರೂಢಿಸಿಕೊಂಡರೆ ಮೆದುಳಿಗೆ ಎಲ್ಲಾ ವಿಷಯಗಳು ಸೇರಲಿವೆ. ಯುವ ಸಮೂಹ ಹಾಗೂ ವಿದ್ಯಾರ್ಥಿಗಳು ಓದುವ ಹಾಗೂ ಬರೆಯುವ ಕೆಲಸ ಮಾಡಿ ಕಿವಿ ಮಾತು ಹೇಳಿದರು.

ವಿದ್ಯಾರ್ಥಿಗಳಲ್ಲಿ ಧೈರ್ಯ, ಶೀಲತೆ ಹಾಗೂ ನೈಪುಣ್ಯತೆ ಇದ್ದರೆ ಖಂಡಿತ ಯಶಸ್ಸು ಸಿಗಲಿದೆ. ಯಶಸ್ಸು ಸಿಕ್ಕರೆ ಮನುಷ್ಯ ಸಂಪೂರ್ಣ ಪರಿಪೂರ್ಣನಾಗುತ್ತಾನೆ. ಪತ್ರಿಕೆಗಳ ವಾಚಕರ ವಾಣಿಗಳಲ್ಲಿ ಸಮಾಜದ ಓರೆ-ಕೋರೆಗಳ ಬಗ್ಗೆ ಬರೆಯುವ ಹವ್ಯಾಸ ಬೆಳೆಸಿಕೊಳ್ಳಿ ಎಂದರು.

ಎಲ್ಲಾ ಕ್ಷೇತ್ರದಲ್ಲೂ ವಿದ್ಯಾರ್ಥಿಗಳು ಕ್ರಿಯಾಶೀಲರಾದರೆ ಮಾತ್ರ ದೇಶದ ಪ್ರಗತಿ ಹಾಗೂ ಚಿತ್ರಣ ಬದಲಾವಣೆಗೆ ಕಾರಣವಾಗುತ್ತದೆ. ಆ ಕೆಲಸ ವಿದ್ಯಾರ್ಥಿಗಳು ಮಾಡಲಿ ಎಂದು ಸಲಹೆ ನೀಡಿದರು.

ಮುಖ್ಯ ಅತಿಥಿಯಾಗಿದ್ದ ರಾಷ್ಟ್ರಮಟ್ಟದ ಬಾಕ್ಸಿಂಗ್ ಪಟು ಯಶಸ್ವಿನಿ ಮಾತನಾಡಿದರು. ಸಮಾರಂಭದಲ್ಲಿ ಪ್ರಾಂಶುಪಾಲರಾದ ಡಾ.ಪಿ. ಮಹದೇವಮ್ಮ, ದೈಹಿಕ ಶಿಕ್ಷಣ ನಿರ್ದೇಶಕ ಎಂ. ಮಲ್ಲುಸ್ವಾಮಿ, ಸಹಾಯಕ ಪ್ರಾಧ್ಯಾಪಕರಾದ ಡಾ.ಎಚ್.ಪಿ. ಪಂಕಜ, ಎ.ಎಸ್. ಅನಿತಾ, ಕಲಾ ವಿಭಾಗದ ಚೇತನ್, ವಾಣಿಜ್ಯ ವಿಭಾಗದ ಮಲ್ಲಿಕಾರ್ಜುನ, ಕ್ರೀಡಾ ವಿಭಾಗದ ನಾಗೇಂದ್ರ ಸೇರಿದಂತೆ ವಿದ್ಯಾರ್ಥಿಗಳಿದ್ದರು.



ಗುಂಡ್ಲುಪೇಟೆಯಲ್ಲಿ ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಗಳ ಸಮಾರೋಪದಲ್ಲಿ ರಾಜೇಂದ್ರ ಶ್ರೀಗಳ ಭಾವಚಿತ್ರಕ್ಕೆ ರಾಜ್ಯೋತ್ಸವ ಪುರಸ್ಕೃತ ಪ್ರೊ.ಕೆ. ರಾಮಮೂರ್ತಿ ಪುಷ್ಪಾರ್ಚನೆ ಮಾಡಿದರು.

ರಾಜೇಂದ್ರ ಶ್ರೀಗಳ ದೂರದೃಷ್ಟಿ ಫಲ


ಗುಂಡ್ಲುಪೇಟೆ ತಾಲೂಕಿನಲ್ಲಿ ಸುತ್ತೂರು ಜಗದ್ಗುರು ರಾಜೇಂದ್ರ ಶ್ರೀಗಳ ದೂರದೃಷ್ಟಿಯ ಫಲವಾಗಿ ಕಾಲೇಜು ಆರಂಭಿಸಿದ್ದ ಫಲವಾಗಿ ಸಾವಿರಾರು ವಿದ್ಯಾರ್ಥಿಗಳು ಅದರಲ್ಲೂ ವಿದ್ಯಾರ್ಥಿನಿಯರು ಮುಖ್ಯ ವಾಹಿನಿಗೆ ಬರಲು ಕಾರಣರಾಗಿದ್ದಾರೆ ಎಂದು ಜೆಎಸ್‌ಎಸ್ ಮಹಾ ವಿದ್ಯಾಪೀಠದ ಕಾಲೇಜು ವಿಭಾಗದ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ ಹೇಳಿದರು.

ರಾಜೇಂದ್ರ ಶ್ರೀಗಳ ಕಾಳಜಿಯಿಂದ ಗುಂಡ್ಲುಪೇಟೆಯಲ್ಲಿ ಜೆಎಸ್‌ಎಸ್ ಸಂಸ್ಥೆ ಹೆಸರಲ್ಲಿ ಪ್ರೌಢ ಶಾಲೆ, ಕಾಲೇಜು ಸ್ಥಾಪನೆ ಮಾಡಿದ್ದು ನಿಮ್ಮೆಲ್ಲರು ಶೈಕ್ಷಣಿಕವಾಗಿ ಮುಂದೆ ಬರಲಿ ಕಾರಣೀಭೂತರು ಎಂದರು.

ಜೆಎಸ್‌ಎಸ್ ಸಂಸ್ಥೆ ಶಾಲಾ, ಕಾಲೇಜು ಆರಂಭಕ್ಕೆ ಸೀಮಿತವಾಗದೆ, ರಂಗೋತ್ಸವದ ಮೂಲಕ ಜನಪದಕ್ಕೂ ಅವಕಾಶ ಮಾಡಿ ಕೊಟ್ಟಿದೆ. ಈ ಎಲ್ಲಾ ಅವಕಾಶಗಳನ್ನು ಬಳಸಿಕೊಂಡು ಪ್ರಗತಿಯತ್ತ ಹೆಜ್ಜೆ ಹಾಕಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಉಪಕದನದಲ್ಲಿ ಕಾಂಗ್ರೆಸ್‌ಗೆ ಜಯ: ಕೊಳ್ಳೇಗಾಲದಲ್ಲಿ ಕಾರ್ಯಕರ್ತರ ಹರ್ಷ

ಪಟಾಕಿ ಸಿಡಿಸಿ, ಸಿಹಿ ಹಂಚಿ ಕಾಂಗ್ರೆಸ್ಸಿಗರಿಂದ ಸಂಭ್ರಮಾಚರಣೆ



ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆಯಲ್ಲಿ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಭೂತಪೂರ್ವ ಜಯ ಸಾಧಿಸಿದ್ದಕ್ಕೆ ಕಾಂಗ್ರೆಸ್ ಕಾರ್ಯಕರ್ತರು ಸಂಭ್ರಮಾಚರಿಸಿದರು.

ಕೊಳ್ಳೇಗಾಲ: ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭೂತಪೂರ್ವ ಜಯ ಸಾಧಿಸಿದ್ದಕ್ಕೆ ಕಾಂಗ್ರೆಸ್ ಕಾರ್ಯಕರ್ತರು ಒಗ್ಗೂಡಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಿಸಿದರು. ಪಟ್ಟಣದ ಮಸೀದಿ ವೃತ್ತದಲ್ಲಿ ಪಟಾಕಿ ಸಿಡಿಸಿ, ಸಿಹಿ ತಿನ್ನಿಸುವ ಮೂಲಕ ಕಾಂಗ್ರೆಸ್‌ಗೆ ಜೈಕಾರ ಕೂಗಿ ಸಂಭ್ರಮಿಸಿದರು. ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್, ಕಾರ್ಯದರ್ಶಿ ಬಸ್ತೀಪುರ ರವಿ, ನಗರಸಭೆ ಮಾಜಿ ಅಧ್ಯಕ್ಷ ಬಸ್ತಿಪುರ ಶಾಂತರಾಜು, ಮಾಜಿ ಸದಸ್ಯ ರಾಮಕೃಷ್ಣ, ಧರಣೇಶ್, ನಾಮ ನಿರ್ದೇಶಿತ ಸದಸ್ಯ ದೇವಾನಂದ್, ಯುವ ಕಾಂಗ್ರೆಸ್ ಮುಖಂಡ ಚೇತನ್ ದೊರೆರಾಜು, ಮುಖಂಡರಾದ ಸಿದ್ಧಾರ್ಥ್, ಬಾಲರಾಜು, ಸೋಮು, ಶ್ರೀಧರ್, ಜಗದೀಶ್, ಶಿವಮಲ್ಲು, ಪ್ರಭುಸ್ವಾಮಿ, ಸೋಮೇಶ್ ಇನ್ನಿತರಿದ್ದರು.

ದಿನಗೂಲಿ ನೌಕರರ ಮುಷ್ಕರ ಆರನೇ ದಿನಕ್ಕೆ ಪಾದಾರ್ಪಣೆ

ಸರ್ಕಾರ, ಅಧಿಕಾರಿಗಳ ನಿರ್ಲಕ್ಷ್ಯ ಖಂಡಿಸಿ ಕಾರ್ಮಿಕರಿಂದ ಅಹೋರಾತ್ರಿ ಹೋರಾಟ

• **ಕನ್ನಡಪ್ರಭ ವಾರ್ತೆ** ಗುಂಡ್ಲುಪೇಟೆ

ಕಳೆದ 5 ದಿನಗಳಿಂದ ಬಂಡೀಪುರ ಸಫಾರಿ ಕೇಂದ್ರದ ಆವರಣದಲ್ಲಿ ರಾಜ್ಯ ಅರಣ್ಯ ವನ್ಯಜೀವಿ ಘಟಕಗಳ ದಿನಗೂಲಿ ಹೊರ ಗುತ್ತಿಗೆ ನೌಕರರ ಸಂಘ ಅಹೋರಾತ್ರಿ ಮುಷ್ಕರ ನಡೆಸುತ್ತಿದ್ದರೂ, ಸರ್ಕಾರ ಹಾಗೂ ಅರಣ್ಯ ಇಲಾಖೆ ಹಿರಿಯ ಅಧಿಕಾರಿಗಳ ನಿರ್ಲಕ್ಷ್ಯ ಖಂಡಿಸಿ ಮಂಗಳವಾರ ಬಂಡೀಪುರ ಸಫಾರಿ ಕೇಂದ್ರ ಆವರಣದಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿ ಬಂಡೀಪುರ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಿದರು.

ರಾಜ್ಯ ಅರಣ್ಯ ವನ್ಯಜೀವಿ ಘಟಕಗಳ ದಿನಗೂಲಿ ಹೊರ ಗುತ್ತಿಗೆ ನೌಕರರ ಸಂಘ ಸಂಘದ ರಾಜ್ಯಾಧ್ಯಕ್ಷ ಎಂ. ನಾಗರಾಜು ನೇತೃತ್ವದಲ್ಲಿ ಸಫಾರಿ ಆವರಣದಲ್ಲಿ ಮುಷ್ಕರ ನಡೆಸುತ್ತಿದ್ದ ಸ್ಥಳದಿಂದ ಸಫಾರಿ ಕೇಂದ್ರದ ಬಳಿಯ ಬಂಡೀಪುರ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿ ತನಕ ಪ್ರತಿಭಟನೆ ನಡೆಸಿ, ಘೋಷಣೆಗಳನ್ನು ಕೂಗುತ್ತ ಮುತ್ತಿಗೆ ಹಾಕಿದರು.

ರಾಜ್ಯ ಅರಣ್ಯ ವನ್ಯಜೀವಿ ಘಟಕಗಳ ದಿನಗೂಲಿ ಹೊರಗುತ್ತಿಗೆ ನೌಕರರ ಸಮಸ್ಯೆ ಬಗೆಹರಿಸಬೇಕು ಎಂದು ರಾಜ್ಯಾಧ್ಯಕ್ಷ ಎಂ. ನಾಗರಾಜು ಆಗ್ರಹಪೂರ್ವಕ ಮನವಿ ಪತ್ರವನ್ನು ಬಂಡೀಪುರ ಅರಣ್ಯ ಸಂರಕ್ಷಣಾಧಿಕಾರಿ ಎಸ್. ಪ್ರಭಾಕರನ್‌ರಿಗೆ ಸಲ್ಲಿಸಿದರು.



ಬಂಡೀಪುರ ಸಫಾರಿ ಆವರಣದಲ್ಲಿ ದಿನಗೂಲಿ ನೌಕರರು ಪ್ರತಿಭಟನಾ ಮೆರವಣಿಗೆ ನಡೆಸಿದರು.

ಏ.30ರಂದು ಮುಷ್ಕರ ನಡೆಸುತ್ತಿದ್ದರೂ ಸರ್ಕಾರ ಹಾಗೂ ಹಿರಿಯ ಅಧಿಕಾರಿಗಳು ಸಮಸ್ಯೆ ಬಗೆಹರಿಸಿಕೊಡಲು ಬೆಂಗಳೂರಿಗೆ ಬನ್ನಿ ಎನ್ನುತ್ತಿದ್ದಾರೆ. ಮುಷ್ಕರ ಸ್ಥಳಕ್ಕೆ ಬರುತ್ತಿಲ್ಲ. ಬೆಂಗಳೂರಲ್ಲಿ ಸಚಿವರು ಹಾಗೂ ಹಿರಿಯ ಅಧಿಕಾರಿಗಳನ್ನು ಈ ಹಿಂದೆ ಹಲವು ಬಾರಿ ಭೇಟಿ ಮಾಡಿ ನೌಕರರ ಸಮಸ್ಯೆ ಹೇಳಿಕೊಂಡರೂ ಭೇಟಿಯಾದ ಆಯ್ತು ಅಂತ ಹೇಳಿದ್ದಾರೆ. ಆದರೆ ಕೆಲಸ ಮಾತ್ರ ಮಾಡುತ್ತಿಲ್ಲ ಎಂದು ಆರೋಪಿಸಿದರು.

ಬಂಡೀಪುರ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ನಿರ್ದೇಶಕ ಎಸ್. ಪ್ರಭಾಕರನ್ ನೌಕರರ ಮನವಿ ಸ್ವೀಕರಿಸಿ ಮಾತನಾಡಿ, ನಿಮ್ಮ ಮನವಿಯನ್ನು ಕೇಂದ್ರ ಕಚೇರಿಗೆ ಕಳುಹಿಸಲಾಗಿದ್ದು, ಸಮಸ್ಯೆ ಈಡೇರಿಕೆಗೆ ಸಮಿತಿ ರಚಿಸಿ, ಹಂತ ಹಂತವಾಗಿ ಸಮಸ್ಯೆ ಬಗೆಹರಿಸಲಾಗುವುದು ಪ್ರತಿಭಟನೆ ಕೈ ಬಿಡಿ ಎಂದು ಮನವಿ ಮಾಡಿದರು.

ಬಂಡೀಪುರ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಕ್ಷೇತ್ರ ನಿರ್ದೇಶಕ ಎಸ್. ಪ್ರಭಾಕರನ್ ಮಾತಿಗೆ ಸೊಪ್ಪು ಹಾಕದ ನೌಕರರು ನಮ್ಮ ಬೇಡಿಕೆ ಸಮಸ್ಯೆ ಈಡೇರಿಸುವ ತನಕ ಮುಷ್ಕರ ಮಾತ್ರ ನಿಲ್ಲಿಸುವುದಿಲ್ಲ. ಹೊರ ನಡೆದು ಮತ್ತೆ ಮುಷ್ಕರ ಆರಂಭಿಸಿದ್ದಾರೆ.

ಪ್ರತಿಭಟನೆಯಲ್ಲಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಹರೀಶ್ ಹಾಗೂ ಅಬ್ದುಲ್ ಹನೀಫ್, ಅಣ್ಣಯ್ಯಸ್ವಾಮಿ, ಶ್ರೀನಿವಾಸ್, ಕೃಷ್ಣರಾಜು, ಮಹೇಂದ್ರ, ಶ್ರೀಕಾಂತ್, ಮಹೇಶ್ ಸೇರಿದಂತೆ ನೂರಾರು ಮಂದಿ ಇದ್ದರು.

ಅಂಗವೈಕಲ್ಯದಲ್ಲೂ ಸಾಧನೆ: ಗಣೇಶ್ ಪ್ರಸಾದ್ ನೆರವು

• **ಕನ್ನಡಪ್ರಭ ವಾರ್ತೆ** ಗುಂಡ್ಲುಪೇಟೆ

ತಾಲೂಕಿನ ರಾಘವಾಪುರ ಗ್ರಾಮದ ಬಾಲಕಿ ಮಾನಸ, ಮೈಸೂರಿನ ರಂಗರಾವ್ ಸ್ಮಾರಕ ಅಂಗವಿಕಲರ ಶಾಲೆಯಲ್ಲಿ ಓದಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 617 ಅಂಕ ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ಪಾಸಾಗಿದ್ದ ಹಿನ್ನಲೆ ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಮುಂದಿನ ವಿದ್ಯಾಭ್ಯಾಸಕ್ಕೆ ನೆರವು ನೀಡುವುದಾಗಿ ಭರವಸೆ ನೀಡಿದ್ದಾರೆ. ರಾಘವಾಪುರ ಗ್ರಾಮದ ಮಾನಸ ಮನೆಗೆ ತೆರಳಿ ವಯಕ್ತಿಕವಾಗಿ ನೆರವು ನೀಡಿದ್ದು, ಅಲ್ಲದೇ ಮುಂದಿನ ವಿದ್ಯಾಭ್ಯಾಸಕ್ಕೂ ನೆರವು ನೀಡುವುದಾಗಿ ಶಾಸಕರು ಹೇಳಿದ್ದಾರೆ ಎಂದು ಹಾಪ್‌ಕಾಮ್ಸ್ ಅಧ್ಯಕ್ಷ ಎಂ. ನಾಗೇಶ್ ತಿಳಿಸಿದ್ದಾರೆ. 617 ಅಂಕ ಪಡೆದ ಮಾನಸಗೆ ದೂರದ ವಸ್ತು ಕಾಣಿಸದ ದೃಷ್ಟಿದೋಷವಿದೆ.

ಈ ಸಮಯದಲ್ಲಿ ಕಾಡ ಅಧ್ಯಕ್ಷ ಪಿ. ಮರಿಸ್ವಾಮಿ, ಹಾಪ್ ಕಾಮ್ಸ್ ಅಧ್ಯಕ್ಷ ಎಂ. ನಾಗೇಶ್, ಗ್ರಾಪಂ ಮಾಜಿ ಅಧ್ಯಕ್ಷ ಆರ್.ಎಸ್. ಗೋವಿಂದ ರಾಜು, ಡೇರಿ ಮಾಜಿ ಅಧ್ಯಕ್ಷ ಶಂಭುಲಿಂಗ ಸ್ವಾಮಿ, ಮುಖಂಡರಾದ ನಾಗಸುಂದರ್, ಶಂಕರ ಶೆಟ್ಟಿ, ಸಿದ್ದಶೆಟ್ಟಿ ಹಾಗೂ ಇತರರು ಇದ್ದರು.



ರಾಘವಾಪುರ ಗ್ರಾಮದ ಬಾಲಕಿ ಮಾನಸ, ಮೈಸೂರಿನ ರಂಗರಾವ್ ಸ್ಮಾರಕ ಅಂಗವಿಕಲರ ಶಾಲೆಯಲ್ಲಿ ಓದಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 617 ಅಂಕ ಪಡೆದ ಮಾನಸಾಗೆ ಶಾಸಕ ಗಣೇಶ್ ಪ್ರಸಾದ್ ಅಭಿನಂದಿಸಿದರು.

₹1.66 ಕೋಟಿ ಅಭಿವೃದ್ಧಿಗೆ ಶಾಸಕ ಗಣೇಶ್ ಭೂಮಿಪೂಜೆ

ಚಾಮರಾಜನಗರ ತಾಲೂಕಿನ ಕೆಲಸಗಳಿಗೆ ಚಾಲನೆ



ಚಾಮರಾಜನಗರ ತಾಲೂಕಿನ ವಿವಿಧ ಅಭಿವೃದ್ಧಿ ಕಾಮಗಾರಿಗೆ ಶಾಸಕ ಗಣೇಶ್ ಪ್ರಸಾದ್, ಕಾಡಾ ಅಧ್ಯಕ್ಷ ಪಿ. ಮರಿಸ್ವಾಮಿ ಶಂಕುಸ್ಥಾಪನೆ ನೆರವೇರಿಸಿದರು.

• **ಕನ್ನಡಪ್ರಭ ವಾರ್ತೆ** ಚಾಮರಾಜನಗರ

ತಾಲೂಕಿನ ಹರವೆ ಹೋಬಳಿಯ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಸೇರಿದ ಬೆಟ್ಟದಪುರ, ಸಾಗಡೆ, ಕೂಟೇಗೌಡನ ಹುಂಡಿ ಹಾಗೂ ಕೆಂಗಾಕಿ ಗ್ರಾಮಗಳ ರೈತರ ಜಮೀನುಗಳಿಗೆ ಹೋಗುವ ರಸ್ತೆಗಳ ಅಭಿವೃದ್ಧಿಗೆ ಕಾವೇರಿ ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರದಿಂದ 1.66 ಕೋಟಿ ರು. ಬಿಡುಗಡೆಯಾಗಿದೆ ಎಂದು ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ತಿಳಿಸಿದರು.

4 ಗ್ರಾಮಗಳ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ವಿಶೇಷ ಕಾಳಜಿ ಮತ್ತು ಕಾಡಾ ಅಧ್ಯಕ್ಷ ಪಿ. ಮರಿಸ್ವಾಮಿ ಅವರ ಮುತುರ್ವಜಿಯಿಂದ ನಮ್ಮ ಕ್ಷೇತ್ರದ ವ್ಯಾಪ್ತಿಯಲ್ಲಿ 1.66 ಕೋಟಿ ರು. ವೆಚ್ಚದ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿವೆ. ಅವರಿಗೆ ನಿಮ್ಮೆಲ್ಲರ ಪರವಾಗಿ ಹಾಗೂ ಕ್ಷೇತ್ರದ ಶಾಸಕನಾಗಿ ಅಭಿನಂದನೆಯನ್ನು ಸಲ್ಲಿಸುತ್ತೇನೆ ಎಂದರು.

ಬೆಟ್ಟದಪುರದಿಂದ ಹೊಸಹಳ್ಳಿ ಕಟ್ಟೆವರಿಗೆ ರಸ್ತೆ ಅಭಿವೃದ್ಧಿಗೆ 54 ಲಕ್ಷ ರು. ಸರ್ಕಾರಿ ಶಾಲೆಯ ರಸ್ತೆಯಿಂದ ಗುರುಬಸಪ್ಪ ಅವರ ಜಮೀನಿನ ರಸ್ತೆವರೆಗೆ 26 ಲಕ್ಷ ರು., ಕೂಟೇಗೌಡನ ಹುಂಡಿಯಲ್ಲಿ ಮರಿಗೌಡನ ಜಮೀನಿನಿಂದ ಶಿವೇಗೌಡನ ಜಮೀನವರೆಗಿನ ರಸ್ತೆ ಅಭಿವೃದ್ಧಿಗೆ 15 ಲಕ್ಷ ರು. ಕೆಂಗಾಕಿ ಗ್ರಾಮದ ಪಿ. ಮಹದೇವಯ್ಯ ಜಮೀನಿನಿಂದ ಕೃಷ್ಣಮೂರ್ತಿ ಜಮೀನಿನವರೆಗೆ 15 ಲಕ್ಷ ರು., ಕೆಂಗಾಕಿ ಗ್ರಾಮದ ಮಂಜು ಜಮೀನಿನಿಂದ ಸಾಗಡೆ ಮುಖ್ಯ ರಸ್ತೆವರೆಗೆ 14 ಲಕ್ಷ ರು. ಸಾಗಡೆ ಗ್ರಾಮದ ಬಸವಣ್ಣನ ಜಮೀನಿನಿಂದ ಬಸವೇಶ್ವರ ದೇವಸ್ಥಾನದವರೆಗೆ 10 ಲಕ್ಷ ರು. ಸಾಗಡೆ ವೆಂಕಟರಮಣ ನಾಯಕರ ಜಮೀನಿನಿಂದ ಸಿದ್ದಪ್ಪನ ಜಮೀನಿನವರೆಗೆ 8 ಲಕ್ಷ ರು. ಸಾಗಡೆ ಬಿಳಿಗಿರಿ ನಾಯಕರ ಜಮೀನಿನಿಂದ ಚಿಕ್ಕಯ್ಯನ ಕಾಲುವೆಗೆವರೆಗೆ ರಸ್ತೆ ಅಭಿವೃದ್ಧಿಗೆ 24 ಲಕ್ಷ ರು.ಗಳು ಸೇರಿದಂತೆ 1.66 ಕೋಟಿ ರು. ಕಾಮಗಾರಿಗೆ ಮಂಗಳವಾರ ಚಾಲನೆ ನೀಡಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯ ಕೆರೆಹಳ್ಳಿ ನವೀನ್, ಜಿಲ್ಲಾ ಕಾಂಗ್ರೆಸ್ ಮಹಿಳಾ ಅಧ್ಯಕ್ಷೆ ನಾಗರತ್ನ, ರೇಖಾ, ಗ್ರಾಪಂ ಮಾಜಿ ಅಧ್ಯಕ್ಷ ಶಿವಕುಮಾರ್, ಮಹೇಶ್, ಗ್ರಾಪಂ ಸದಸ್ಯ ಕಾಡಪ್ಪ, ಸೋಮಶೇಖರ್, ಶಿವಕುಮಾರ್, ನಾಗೇಂದ್ರ, ಮಾಜಿ ತಾಪಂ ಸದಸ್ಯ ಶೋಭಾ ಮಹೇಶ್, ನಂಜುಂಡ ನಾಯಕ, ಬಂಗಾರ ನಾಯಕ, ಬಸವಶೆಟ್ಟಿ, ವೆಂಕಟರಮಣ ನಾಯಕ, ಪಟೇಲ್ ಸುರೇಶ್, ನಟರಾಜು, ಗೌಡಿಕೆ ರೇವಣ್ಣ ಆನಂದ್ ಮೊದಲಾದವರು ಇದ್ದರು.

ಹನೂರು ವೃತ್ತಕ್ಕೆ ನಾಡಪ್ರಭು ಹೆಸರಿಡಲು ವಿಳಂಬಕ್ಕೆ ಕಿಡಿ

ಪಪಂ ಅಧಿಕಾರಿಗಳಿಗೆ ಮುಖಂಡರ ತರಾಟೆ

• **ಕನ್ನಡಪ್ರಭ ವಾರ್ತೆ** ಹನೂರು

ಪಟ್ಟಣದ ಮಹದೇಶ್ವರ ಬೆಟ್ಟ ರಸ್ತೆ, ರಾಮಾಪುರ ರಸ್ತೆ ಹಾಗೂ ಎಲ್ಲೆಮಾಳ ರಸ್ತೆ ಸೇರುವ ಪ್ರಮುಖ ವೃತ್ತಕ್ಕೆ ನಾಡಪ್ರಭು ಕೆಂಪೇಗೌಡ ವೃತ್ತ ಎಂದು ನಾಮಕರಣ ಮಾಡುವ ಪ್ರಕ್ರಿಯೆಯನ್ನು ಶೀಘ್ರ ಅಂತಿಮಗೊಳಿಸಬೇಕೆಂದು ಒಕ್ಕಲಿಗ ಸಮುದಾಯದ ಮುಖಂಡರು ಒತ್ತಾಯಿಸಿದರು.

ಮಂಗಳವಾರ ಪಟ್ಟಣ ಪಂಚಾಯ್ತಿ ಕಚೇರಿಗೆ ಭೇಟಿ ನೀಡಿದ ಮುಖಂಡರು, ಅಧಿಕಾರಿಗಳಿಗೆ ಮೌಖಿಕ ಮನವಿ ಸಲ್ಲಿಸಿದರು. 2022-23ರಿಂದಲೇ ಪ್ರಕ್ರಿಯೆ ಆರಂಭವಾಗಿದ್ದರೂ ಇದುವರೆಗೆ ಪೂರ್ಣಗೊಳ್ಳದಿರುವುದು ಎಷ್ಟರಮಟ್ಟಿಗೆ ಸರಿ ಎಂದು ಪ್ರಶ್ನಿಸಿದರು.

ಈ ಹಿಂದೆ ಮುಖ್ಯಾಧಿಕಾರಿಯಾಗಿದ್ದ ಮಹೇಶ್ ಕುಮಾರ್ ಅವರ ಅವಧಿಯಲ್ಲಿ ನಾಮಕರಣಕ್ಕೆ ಸಂಬಂಧಿಸಿದ ಪ್ರಕ್ರಿಯೆ ಪೂರ್ಣಗೊಳಿಸಿ ಜಿಲ್ಲಾಧಿಕಾರಿ ಕಚೇರಿಗೆ ಕಳುಹಿಸಲಾಗಿತ್ತು. ಆದರೂ ಪಟ್ಟಣ ಪಂಚಾಯ್ತಿಯಲ್ಲಿ ಅನಗತ್ಯ ವಿಳಂಬದಿಂದ ಗೊಂದಲ ಉಂಟಾಗಿದೆ ಎಂದು ಮುಖಂಡರು ಆರೋಪಿಸಿದರು.

ಈ ವೇಳೆ ಮಾತನಾಡಿದ ಕೊಳ್ಳೇಗಾಲ-ಯಳಂದೂರು ಹಾಗೂ ಒಕ್ಕಲಿಗ ಸಂಘದ ನಿರ್ದೇಶಕ ಮಂಜೇಶ್, ನಾಡಪ್ರಭು ಕೆಂಪೇಗೌಡರು ನಮ್ಮ ನಾಡಿನ ಹೆಮ್ಮೆ. ಅವರ ಹೆಸರನ್ನು ವೃತ್ತಕ್ಕೆ ಇಡುವ ಬಹುಕಾಲದ ಬೇಡಿಕೆ. ಇನ್ನಷ್ಟು ವಿಳಂಬವಿಲ್ಲದೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ನಂತರ ಪಪಂ ಮಾಜಿ ಉಪಾಧ್ಯಕ್ಷ ಗಿರೀಶ್ ಮಾತನಾಡಿ, ನಾಮಕರಣದ ಎಲ್ಲಾ ಪ್ರಕ್ರಿಯೆಗಳು ಪೂರ್ಣಗೊಂಡಿದ್ದರೂ, ವಿಳಂಬವಾಗುತ್ತಿರುವುದು ಸಮಂಜಸವಲ್ಲ. ಜನರ ಭಾವನೆಗಳಿಗೆ ಗೌರವ ನೀಡಿ ಅಧಿಕಾರಿಗಳು ಶೀಘ್ರ ಅಂತಿಮಗೊಳಿಸಬೇಕು ಎಂದು ಹೇಳಿದರು.

ಇದಕ್ಕೆ ಪ್ರತಿಕ್ರಿಯಿಸಿದ ಪಂಚಾಯ್ತಿ ಮುಖ್ಯಾಧಿಕಾರಿ ರೇಖಾ, ನಾಮಕರಣ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ. ಸಂಬಂಧಿತ ದಾಖಲೆಗಳು ಮೇಲಧಿಕಾರಿಗಳ ಪರಿಶೀಲನೆಯಲ್ಲಿ ಇದ್ದು, ಶೀಘ್ರದಲ್ಲೇ ಅಗತ್ಯ ಕ್ರಮ ಕೈಗೊಂಡು ಪ್ರಕ್ರಿಯೆ ಪೂರ್ಣಗೊಳಿಸಲಾಗುತ್ತದೆ ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಕೆಂಪೇಗೌಡ ಸಂಘದ ಜಿಲ್ಲಾಧ್ಯಕ್ಷ ನಾಗೇಂದ್ರ, ಮಾಜಿ ಉಪಾಧ್ಯಕ್ಷ ಗಿರೀಶ್ ಹಾಗೂ ಸ್ಥಳೀಯ ಯುವ ಮುಖಂಡರಾದ ಮಹೇಶ್, ಚೇತನ್, ಮಂಜು, ಅಭಿ, ವೆಂಕಿ, ಸೋಮಣ್ಣ, ನಂದೀಶ್ ಇದ್ದರು.

ಸುತ್ತೂರು ಶ್ರೀಗಳಿಗೆ ಭವ್ಯ ಸ್ವಾಗತ



ಗುಂಡ್ಲುಪೇಟೆ ತಾಲೂಕಿನ ಹಂಗಳದಲ್ಲಿ ಮಂಗಳವಾರ ನಡೆದ ಮಠಾಧೀಶರ ಗೋಷ್ಠಿಗೆ ಆಗಮಿಸಿದ ಸುತ್ತೂರು ಮಠಾಧೀಶ ಶಿವರಾತ್ರಿ ದೇಶೀಕೇಂದ್ರ ಮಹಾಸ್ವಾಮೀಜಿ ಅವರನ್ನು ಗ್ರಾಮಸ್ಥರು ಬರಮಾಡಿಕೊಂಡರು. ಮುಖಂಡರಾದ ಎಚ್.ಎಸ್. ನಂಜಪ್ಪ, ಎಚ್.ಎಂ. ಮಹದೇವಪ್ಪ, ಪ್ರಣಯ್ ಸೇರಿದಂತೆ ಹಲವರಿದ್ದರು.